ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29-04-2021 ರನ್ವಯ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳ ರಸ್ತೆ ದುರಸ್ಥಿ ಮತ್ತು ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಯಡಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Improvements and Restoration of roads in Ward No.06 (Package 02) (Package Consists of 11 works) Indent No. 48375" ಪ್ಯಾಕೇಜಿನ ರೂ.11.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29-04-2021.
2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮು.ಆ/ಪಿ.ಆರ್/3477/2021-22, ದಿನಾಂಕ: 29-12-2021.
3. ದಿನಾಂಕ: 13-01-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 29-04-2021ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2020-21ನೇ ಸಾಲಿನ ರಾಜ್ಯ ಆಯವ್ಯಯದ ಕಂಡಿಕೆ: 205 ರಲ್ಲಿ ಘೋಷಿಸಿರುವಂತೆ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳ ರಸ್ತೆ ದುರಸ್ಥಿ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.1000.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: 277, 278, 279, 280, 281, 282, 283, 284, 285, 286 ಮತ್ತು 287ರ ಒಟ್ಟು 11 ಕಾಮಗಾರಿಗಳಿಗೆ ಒಟ್ಟು ರೂ.11.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 29-12-2021ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 110 ಹಳ್ಳಿಗಳ ರಸ್ತೆಗಳನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನೀರಿನ ಪೈಪ್‌ಲೈನ್ ಹಾಗೂ ಒಳಚರಂಡಿ ಅಳವಡಿಸಲು ರಸ್ತೆಗಳನ್ನು ಅಗೆದಿದ್ದು, ಅವುಗಳನ್ನು ಪುನಶ್ಚೇತನಗೊಳಿಸಿದ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದರಿಂದ 2020-21ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯದಲ್ಲಿ 110 ಹಳ್ಳಿಗಳಲ್ಲಿ ಅಗೆದಿರುವ ರಸ್ತೆಗಳನ್ನು ಪುನಶ್ಚೇತನಗೊಳಿಸುವ ಸಲುವಾಗಿ ರೂ.1000.00 ಕೋಟಿಗಳ ಅನುದಾನವನ್ನು ಮೀಸಲಿರಿಸಲಾಗಿರುತ್ತದೆ. ಈ ಅನುದಾನದಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29-04-2021ರಲ್ಲಿ ವಿಧಾನ ಸಭಾ ಕ್ಷೇತ್ರವಾರು ಅನುದಾನವನ್ನು ಹಂಚಿಕೆ ಮಾಡಲಾಗಿದ್ದು, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ಬ್ಯಾಟರಾಯನಪುರ ವಿಭಾಗಕ್ಕೆ ಹಂಚಿಕೆ ಮಾಡಿರುವ ರೂ.17.00 ಕೋಟಿಗಳ ಅನುದಾನದಲ್ಲಿ ವಾರ್ಡ್ ಸಂಖ್ಯೆ: 06ರ ವ್ಯಾಪ್ತಿಯಲ್ಲಿನ 110 ಹಳ್ಳಿಗಳ ರಸ್ತೆಗಳನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನೀರಿನ ಪೈಪ್‌ಲೈನ್ ಹಾಗೂ ಒಳಚರಂಡಿ ಅಳವಡಿಸಲು ಅಗೆದಿರುವ ರಸ್ತೆಗಳನ್ನು ಪುನಶ್ಚೇತನಗೊಳಿಸುವ ಕಾಮಗಾರಿಗಳ ಕ್ರಿಯಾ ಯೋಜನೆಯಡಿಯಲ್ಲಿ, ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳನ್ನು ಕೈಗೊಳ್ಳಲು ಬ್ಯಾಟರಾಯನಪುರ ವಿಭಾಗ ಕಛೇರಿಯಿಂದ ಟೆಂಡರ್

. . .2/-

Scanned with CamScanner

ಸಂಖ್ಯೆ: EE/BTP/BBMP/E-PMT/07/2021-22, ದಿನಾಂಕ: 03-09-2021 ರಂತೆ ದ್ವಿಲಕೋಟೆ ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಂತೆ ರೂ.96242550.98 ಗಳಿಗೆ (ಟೆಂಡರ್‌ಗಿಟ್ಟ ಮೊತ್ತ) ಟೆಂಡರ್ ಆಹ್ವನಿಸಲಾಗಿರುತ್ತದೆ.

ಸದರಿ ಪ್ಯಾಕೇಜ್ ಟೆಂಡರ್ "Improvements and Restoration of roads in Ward No.06 (Package 02) (Package Consists of 11 works) Indent No. 48375" ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 18-09-2021 ರಂದು ತೆರೆಯಲಾಗಿದ್ದು, ಐದು ಜನ ಬಿಡ್‌ದಾರರು ಭಾಗವಹಿಸಿರುತ್ತಾರೆ. ಸದರಿಯವರ ತಾಂತ್ರಿಕ ಬಿಡ್‌ನ್ನು ಅಂಗೀಕರಿಸಿ ಆರ್ಥಿಕ ಬಿಡ್‌ನ್ನು ತೆರೆಯಲು ಮುಖ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

ಸದರಿ ಸಭೆಯ ನಿರ್ಣಯದಂತೆ ತಾಂತ್ರಿಕವಾಗಿ ಅರ್ಹರಾದ A. Surya Prakash (Karthik Enterprises) ಮತ್ತು C.G. Chandrappa (CGC Infra Projects Private Limited) ರವರ ಆರ್ಥಿಕ ಬಿಡ್‌ನ್ನು ದಿನಾಂಕ: 18-11-2021 ರಂದು ತೆರೆಯಲಾಯಿತು. ವಿವರ ಈ ಕೆಳಕಂಡಂತಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

ಕ್ರ. ಸಂ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ	ಟೆಂಡರ್‌ಗಿಟ್ಟ ಮೊತ್ತ ರೂ. ಗಳಲ್ಲಿ	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ.ಗಳಲ್ಲಿ)	ಅನುಮೋದಿತ ಎಸ್.ಆರ್ ದರಗಳಿಗೆ ಹೋಲಿಸಿದಾಗ
1	C G Chandrappa (CGC Infra Projects Private Limited)	1100.00	9,62,42,550.98	10,49,05,955.52	9.00% ಹೆಚ್ಚು
2	A Surya Prakash (Karthik Enterprises)			10,63,507,45.24	10.50% ಹೆಚ್ಚು

ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29-04-2021ರಲ್ಲಿ ಕಾಮಗಾರಿಗಳ ಪಟ್ಟಿಗೆ ಅನುಮೋದನೆ ನೀಡಿದ್ದು, ತದನಂತರ ಪಾಲಿಕೆಯು ನಿಯಮಗಳಂತೆ ಅಗತ್ಯ ಕ್ರಮಗಳನ್ನು ಕೈಗೆತ್ತಿಕೊಂಡು, ಯಲಹಂಕ ವಲಯಕ್ಕೆ ಸೇರಿದ ಬ್ಯಾಟರಾಯನಪುರ ವಿಭಾಗದ ವ್ಯಾಪ್ತಿಗೆ ಸಂಬಂಧಪಟ್ಟಂತೆ ಕಾಮಗಾರಿಗಳ ಟೆಂಡರ್ ಪ್ಯಾಕೇಜ್ ಗುತ್ತಿಗೆದಾರರಾದ C.G. Chandrappa (CGC Infra Projects Private Limited) ರವರು ನಮೂದಿಸಿರುವ ಟೆಂಡರ್ ಮೊತ್ತ ರೂ.10,49,05,955.52 ಗಳು ಅನುಮೋದಿತ ದರಗಳಿಗೆ ಹೋಲಿಸಿದಾಗ ಶೇ.9.00% ಹೆಚ್ಚಾಗಿರುತ್ತದೆ.

ಮೇಲಿನ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, "Improvements and Restoration of roads in Ward No.06 (Package 02) (Package Consists of 11 works) Indent No. 48375" ಪ್ಯಾಕೇಜಿನ ಯೋಜನಾ ಮೊತ್ತ ರೂ.1100.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಹಾಗೂ ಗುತ್ತಿಗೆದಾರರಾದ C.G. Chandrappa (CGC Infra Projects Private Limited) ರವರು ನಮೂದಿಸಿರುವ ಟೆಂಡರ್ ಮೊತ್ತ ರೂ.10,49,05,955.52 ಗಳ ಅನುಮೋದಿತ ಅಂದಾಜು ಮೊತ್ತಕ್ಕೆ ಹೋಲಿಸಿದಾಗ ಶೇ.9.00% ಹೆಚ್ಚಾಗಿದ್ದು, (ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ

. . .3/-

Scanned with CamScanner

ಇಶ್ಯೂ ದರಗಳಿಗೆ ಹೋಲಿಸಿದಾಗ ಶೇ.9.00% ಹೆಚ್ಚು ದರವಿರುತ್ತದೆ) ಸದರಿ ದರಗಳಿಗೆ ಟೆಂಡರ್ ಅನುಮೋದನೆ ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 13–01–2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 29–12–2021ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ Improvements and Restoration of Roads in Ward No. 06 (Package 02) (Package Consists of 11 works) ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, C G Chandrappa (CGC Infra Projects Private Limited) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.9,62,42,550.98 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.9,72,04,976/– ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ದಿನಾಂಕ: 13–01–2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 05 ಎಂಎನ್‌ವೈ 2022 (ಇ),
ಬೆಂಗಳೂರು, ದಿನಾಂಕ: 18–04–2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29–04–2021 ರಲ್ಲಿ 2020–21ನೇ ಸಾಲಿನ ರಾಜ್ಯ ಆಯವ್ಯಯದ ಕಂಡಿಕೆ: 205 ರಲ್ಲಿ ಘೋಷಿಸಿರುವಂತೆ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳ ರಸ್ತೆ ದುರಸ್ಥಿ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಒಟ್ಟು ರೂ.1000.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: 277, 278, 279, 280, 281, 282, 283, 284, 285, 286 ಮತ್ತು 287ರ ಒಟ್ಟು 11 ಕಾಮಗಾರಿಗಳನ್ನು ಒಗ್ಗೂಡಿಸಿ ಮಾಡಲಾಗಿರುವ "Improvements and Restoration of Roads in Ward No. 06 (Package 02) (Package Consists of 11 works)" ಪ್ಯಾಕೇಜಿನ ರೂ.11.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 13–01–2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, C.G. Chandrappa (CGC Infra Projects Private Limited) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.9,62,42,550.98 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.9,72,04,976–00 (ಒಂಭತ್ತು ಕೋಟಿ ಎಪ್ಪತ್ತೆರಡು ಲಕ್ಷದ ನಾಲ್ಕು ಸಾವಿರದ ಒಂಬೈನೂರ ಎಪ್ಪತ್ತಾರು ರೂಪಾಯಿಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.

. . .4/–

Scanned with CamScanner

2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 06 ಎಂಎನ್‌ವೈ 2021, ದಿನಾಂಕ: 29–04–2021ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 13–01–2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎಸ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.

. . .5/–

Scanned with CamScanner

9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ–3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner